ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 195 ಗ್ರಾಪಂ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 20.02.2018

## ಸುತ್ತೋಲೆ

ವಿಷಯ: ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರೇಡ್-1 ಕಾರ್ಯದರ್ಶಿ, ಗ್ರೇಡ್-2 ಕಾರ್ಯದರ್ಶಿ ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ವೇತನವನ್ನು ಸಕಾಲದಲ್ಲಿ ಪಾವತಿಸುವ ಬಗ್ಗೆ.

*****

ಗ್ರಾಮ ಪಂಚಾಯತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರೇಡ್-1 ಕಾರ್ಯದರ್ಶಿ, ಗ್ರೇಡ್-2 ಕಾರ್ಯದರ್ಶಿ ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ವೇತನವನ್ನು ಸಕಾಲದಲ್ಲಿ ಪಾವತಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆ. ಇದು ಅತ್ಯಂತ ಗಂಭೀರ ವಿಷಯವಾಗಿದೆ. ಸರ್ಕಾರಿ ನೌಕರರ ಮೇಲೆ ಯಾವುದೇ ಪ್ರಕರಣಗಳು ಹಾಗೂ ದೂರುಗಳಿದ್ದರೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಹಾಗೂ ಮೇಲ್ಮನವಿ) ನಿಯಮಾವಳಿಗಳನ್ವಯ ಸೂಕ್ತ ಕ್ರಮ ಕೈಗೊಳ್ಳಬಹುದಾಗಿದೆ. ಆದರೆ ವೇತನವನ್ನು ತಡೆಯುವುದು ಸೂಕ್ತವಲ್ಲ.

ಆದ್ದರಿಂದ ಗ್ರಾಮ ಪಂಚಾಯತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ನೌಕರರುಗಳ ವೇತನವನ್ನು ನಿಯಮಿತವಾಗಿ ಪಾವತಿಸಲು ಕ್ರಮವಹಿಸುವಂತೆ ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಈ ಮೂಲಕ ಸೂಚಿಸಿದೆ. ಗ್ರಾಮ ಪಂಚಾಯತಿ ನೌಕರರ ವೇತನ ಪಾವತಿಸಲು ವಿಳಂಬವಾದರೆ ಸಂಬಂಧಪಟ್ಟ ಕಾರ್ಯನಿರ್ವಾಹಕ ಅಧಿಕಾರಿಗಳನ್ನು ನೇರ ಹೊಣೆಗಾರರನ್ನಾಗಿ ಮಾಡಿ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಈ ಮೂಲಕ ಸೂಚಿಸಿದೆ.

20/2/18

(ಎಂ.ಕೆ. ಕೆಂಪೇಗೌಡ)
ನಿರ್ದೇಶಕರು(ಪಂ.ರಾಜ್-1) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1. ಎಲ್ಲಾ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ಎಲ್ಲಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು.
3. ಎಲ್ಲಾ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು.
4. ಗಣಕ ಶಾಖೆ.